ಕಾರ್ಯಭಾರ ಇರುವ ಇತರ ಅನುದಾನಿತ ಖಾಸಗಿ ಪ್ರಾಥಮಿಕ ಶಾಲೆಗಳಿಗೆ ಹಂಚಿಕೆ ಮಾಡಲು ನಿಯಮಗಳಲ್ಲಿ ಆಸ್ಪದ ಇರುತ್ತದೆ ಅದರಂತೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ

ಊ) ಅನುದಾನಿತ ಶಾಲೆಗಳ ಶಿಕ್ಷಕರಿಗೆ ಸಕಾಲದಲ್ಲಿ ಸಹಾಯಾನುದಾನ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ

1604 (1897) ಶ್ರೀ ಮುನಿಯಪ್ಪ ಎಸ್ ಎಂ (ಚಿಕ್ಕಬಳ್ಳಾಪುರ) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರದಲ್ಲಿ ಸಂಜೆ ಕಾಲೇಜು ನಷ್ಟದಲ್ಲಿ ನಡೆಯುತ್ತಿರುವ ವಿಚಾರ ಸರ್ಕಾರದ ಗಮನದಲ್ಲಿ ಇದೆಯೇ,

ಆ) ಚಿಕ್ಕಬಳ್ಳಾಪುರ ನಗರದಲ್ಲಿ ಪ್ರತ್ಯೇಕ ಮಹಿಳಾ ಕಾಲೇಜು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ, ಸಂಜೆ ಕಾಲೇಜನ್ನು ಬದಲಾಯಿಸಿ ಪ್ರತ್ಯೇಕ ಮಹಿಳಾ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಇಲ್ಲ

ಇ) ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ

1606 (1899) ಶ್ರೀ ಮುನಿಯಪ್ಪ ಎಸ್ ಎಂ (ಚಿಕ್ಕಬಳ್ಳಾಪುರ) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರನ್ನು ನೇಮಕ ಮಾಡುವುದು ಕಡ್ಡಾಯವಲ್ಲವೆ,

ಆ) ಹಾಗಿದ್ದಲ್ಲಿ, ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಎಲ್ಲಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರ ನೇಮಕಾತಿ ಕಡ್ಡಾಯವಲ್ಲ ಮಕ್ಕಳ ಸಂಖ್ಯೆಗನುಗುಣವಾಗಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಲಾಗುತ್ತಿದೆ

ಆ) * ಯಾವ ಶಾಲೆಯಲ್ಲಿ 280 ಕ್ಕೂ ಹೆಚ್ಚು ಮಕ್ಕಳ ಸಂಖ್ಯೆ ಇದೆಯೋ ಆ ಶಾಲೆಗೆ ಮಕ್ಕಳ ಶಿಕ್ಷಕರ ಅನುಪಾತಕ್ಕನುಗುಣವಾಗಿ ಅಗತ್ಯ ಇದ್ದಲ್ಲಿ ಏಳನೆಯ ಹುದ್ದೆಗೆ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದೆ ಹಾಗೆಯೇ ಏಳನೇ ತರಗತಿಯವರೆಗೆ ಇರುವ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಕ ಮಾಡಲು ಅವಕಾಶ ಕಲ್ಪಿಸಲಾಗುವುದು

* ಕಾಲಕಾಲಕ್ಕೆ ಅಗತ್ಯತೆಗನುಗುಣವಾಗಿ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುತ್ತಿದ್ದು, ಇತ್ತೀಚೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ 590 ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ದಿನಾಂಕ 25–01–2007 ರಂದು ಅಧಿಸೂಚನೆ ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ

1607 (1900) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು ಎಲ್ಲಾ ಪ್ರೌಢಶಾಲಾ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಉಚಿತವಾಗಿ ವಿತರಿಸುತ್ತಿರುವ ಸೈಕಲ್‌ಗಳ ಸೂಕ್ತ ನಿರ್ವಹಣೆಗೆ ಶಾಲೆಗಳಲ್ಲಿ ಸೈಕಲ್ ಸ್ಟ್ಯಾಂಡ್‌ಗಳನ್ನು ನಿರ್ಮಿಸುವ ಯೋಜನೆ ಸರ್ಕಾರಕ್ಕೆ ಇದೆಯೇ,

ಆ) ಇದ್ದಲ್ಲಿ ಸರ್ಕಾರ ಸೈಕಲ್‌ಗಳನ್ನು ಸುಸ್ಥಿತಿಯಲ್ಲಿಡಲು ಈ ಕೂಡಲೇ ಶಾಲೆಗಳ ಆವರಣದಲ್ಲಿ ಸೂಕ್ತ ನಿಲ್ದಾಣಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳುವರೆ?